ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಶಾಲಾ ಪೂರ್ವ ಮಕ್ಕಳ ಊಟದ ಯೋಜನೆಯ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು) -

48 (36) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಶಾಲಾ ಪೂರ್ವ ಮಕ್ಕಳ ಊಟದ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಮೊತ್ತವೆಷ್ಟು; ರಾಜ್ಯಾದ್ಯಂತ ಈ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಶಾಲಾ ಪೂರ್ವ ಮಕ್ಕಳ ಊಟದ ಯೋಜನೆಯ ಅನ್ವಯ ಮಕ್ಕಳಿಗೆ ಯಾವ ರೀತಿಯ ಆಹಾರ ವಿತರಿಸಲಾಗುತ್ತದೆ;

(ಇ) ರಾಜ್ಯದ ಮಕ್ಕಳ ಅಪೌಷ್ಠಿಕತೆಯ ಪ್ರಮಾಣ ಕಡಿಮೆ ಮಾಡಲು ಕೈಗೊಂಡ ಕ್ರಮಗಳೇನು?